ದಿನಾಂಕ: 17.12.2022 ಶನಿವಾರ ಬೆಳಗ್ಗೆ 11.00 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಆರ್. ಗಂಗಾಧರ, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಸುಭಾಸ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 99
2. ಶ್ರೀ ಶಿವಕುಮಾರ್.ಎ.ಎಸ್.ಐ.
3. ಶ್ರೀ ಶಿವರಾಂ, ಅರಣ್ಯ ಇಲಾಖೆ
4. ಶ್ರೀ ಆನಂದ್‌ಮೂರ್ತಿ, ಸ.ಅ. ಬೆಸ್ಕಾಂ
5. ಶ್ರೀಮತಿ ದಿವ್ಯಾ, ಹಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ರಘು, ಕಿ.ಆ.ಪ
7. ಶ್ರೀ ಎಸ್. ರಾಜಣ್ಣ
8. ಶ್ರೀ ನಾಗರಾಜ್.ಎಸ್. ಸದಸ್ಯರು
9. ಶ್ರೀ ಮನೋಜ್ ಗೌಡ, ಮಾರ್ಷಲ್
10. ಶ್ರೀ ರಾಘವೇಂದ್ರ ರಾವ್,
11. ಶ್ರೀ ವಿ. ಮಂಜುನಾಥ್

ದಿನಾಂಕ: 17.12.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡ್ ಕಮಿಟಿ ಸಭೆಯಲ್ಲಿ ಹೈ ಕೋರ್ಟ್ ಆದೇಶದನ್ವಯ 40 ಅಡಿ ಅಗಲಕ್ಕಿಂತ ಕಡಿಮೆ ಇರುವ ರಸ್ತೆಗಳಲ್ಲಿ ವ್ಯಾಪಾರ ಮಾಡುವ ಅಂಗಡಿ ಮುಂಗಟ್ಟುಗಳ ಬಗ್ಗೆ ಚರ್ಚಿಸಲಾಯಿತು.
2. ವಾರ್ಡ್ ಸದಸ್ಯರು ರಾಜಾಜಿನಗರ 2ನೇ ಬ್ಲಾಕ್, 26ನೇ ಅಡ್ಡ ರಸ್ತೆಯಲ್ಲಿ ಬಾಗಿರುವ ವಿದ್ಯುತ್ ಕಂಬದ ಬಗ್ಗೆ ಚರ್ಚಿಸಲಾಯಿತು. ಸಭೆಯಲ್ಲಿ ಸರ್ವಾನುಮತದಿಂದ ಬದಲಾವಣೆಯನ್ನು ಮಾಡಬೇಕಾಗಿದ್ದು, ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಕೋರಿದರು. ಇದಕ್ಕೆ ಉತ್ತರವಾಗಿ ಬೆಸ್ಕಾಂ ಅಭಿಯಂತರರಿಗೆ ಕ್ರಮ ಕೈಗೊಳ್ಳುವಂತೆ ನೋಡಲ್ ಅಧಿಕಾರಿಗಳು ತಿಳಿಸಿದರು.
3. ಬೆಸ್ಕಾಂ ಕ್ವಾರ್ಟಸ್ ಹತ್ತಿರವಿರುವ ಎದುರು ರಸ್ತೆಯಲ್ಲಿ ಕಸ ತೆರವುಗೊಳಿಸದೆ ಇರುವ ಬಗ್ಗೆ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಆರೋಗ್ಯ ನಿರೀಕ್ಷಕರಾದ ಶ್ರೀ ರಘು ರವರಿಗೆ ಕ್ರಮ ಕೈಗೊಳ್ಳುವಂತೆ ನೋಡಲ್ ಅಧಿಕಾರಿಗಳು ತಿಳಿಸಿದರು.
4. ವಾರ್ಡ್ ಸದಸ್ಯರು ನಮ್ಮ ಕ್ಲೀನಿಕ್ ಬಗ್ಗೆ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ವಾರ್ಡಿನ ನಮ್ಮ ಕ್ಲೀನಿಕ್ ಕಾಮಗಾರಿಯನ್ನು ಮುಕ್ತಾಯಗೊಳಿಸಿ, ಆರೋಗ್ಯ ಇಲಾಖೆಯವರಿಗೆ ಹಸ್ತಾಂತರಿಸಲಾಗಿದೆ ಎಂದು ತಿಳಿಸಿದರು.
5. ವಾರ್ಡ್ ಸದಸ್ಯರು 19ನೇ ಮುಖ್ಯ ರಸ್ತೆಯಲ್ಲಿರುವ ವಾರ್ಡ್ ಕಛೇರಿಯ ಕಾಮಗಾರಿಯ ಬಗ್ಗೆ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಕಾಮಗಾರಿಯು ಪ್ರಗತಿಯಲ್ಲಿದ್ದು, ಮಾರ್ಚ್ ತಿಂಗಳ ಅಂತ್ಯದೊಳಗೆ ಕಾಮಗಾರಿ ಮುಕ್ತಾಯಗೊಳಿಸುವುದಾಗಿ ಗುತ್ತಿಗೆದಾರರು ತಿಳಿಸಿರುತ್ತಾರೆ.
6. ವಾರ್ಡ್ ಸದಸ್ಯರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲಿ ಬರುವ ಮರದ ರಂಭೆಗಳನ್ನು ತೆರವುಗೊಳಿಸಲು ಸೂಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಅರಣ್ಯ ಇಲಾಖೆಯವರಿಗೆ ಮಾಹಿತಿಯನ್ನು ಕೊಟ್ಟು ಆದಷ್ಟು ಬೇಗ ತೆರವುಗೊಳಿಸುವಂತೆ ಸೂಚಿಸಲು ತಿಳಿಸಿದರು.

ಪು.ತಿ.ನೋ.

Scanned by CamScanner

7. ವಾರ್ಡ್ ಸದಸ್ಯರು 25ನೇ ಕ್ರಾಸ್‌ನಲ್ಲಿ ಡಾಂಬರೀಕರಣ [19ನೇ ಮುಖ್ಯ ರಸ್ತೆ, ಸರ್ವಿಸ್ ರಸ್ತೆ] ಹಾಗೂ ಕೆ.ಎಲ್.ಇ. ಕಾಲೇಜ್ ಮುಂಭಾಗದಿಂದ ಡಾ; ರಾಜ್ ಕುಮಾರ್ ರಸ್ತೆ ಸಂಪರ್ಕಿಸುವ ರಸ್ತೆಗೆ ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳಲು ಕೋರಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಅಮೃತ್ ನಗರೋತ್ಥಾನ ಯೋಜನೆಯಲ್ಲಿ ಡಾಂಬರೀಕರಣ ಮಾಡಲಾಗುವುದೆಂದು ತಿಳಿಸಿದರು.

8. ಮಂಜುನಾಥನಗರ ಸೇರುವೆ ಕೆಳಭಾಗದಲ್ಲಿರುವ ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಕಾಂಕ್ರೀಟ್ ಹಾಕಿಸುವ ಬಗ್ಗೆ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ಶ್ರೀ ರಘು ರವರು ಕಾಂಕ್ರೀಟ್ ಹಾಕಲಾಗಿದೆ ಎಂದು ತಿಳಿಸಿದರು.

9. ವಾರ್ಡ್ ಸದಸ್ಯರು ವಿಶ್ವೇಶ್ವರಯ್ಯ ವಾಣಿಜ್ಯ ಸಂಕೀರ್ಣದಲ್ಲಿ ಪಾರ್ಕಿಂಗ್ ಸಮಸ್ಯೆಯಿಂದ ತುಂಬಾ ತೊಂದರೆ ಉಂಟಾಗಿದ್ದು, ಅದನ್ನು ಸರಿಪಡಿಸುವಂತೆ ನೋಡಲ್ ಅಧಿಕಾರಿಗಳಿಗೆ ಕೇಳಿಕೊಂಡರು. ಇದಕ್ಕೆ ಉತ್ತರವಾಗಿ ಈಗಾಗಲೇ ಯೋಜನೆ ಉಪವಿಭಾಗದಿಂದ ಹೊಸದಾಗಿ ಟೆಂಡರ್ ಕರೆಯಲು ಕ್ರಮ ಕೈಗೊಳ್ಳಲಾಗಿದ್ದು, ಪಾರ್ಕಿಂಗ್ ಸಮಸ್ಯೆಯನ್ನು ಪರಿಹರಿಸಲಾಗುವುದು ಎಂದು ತಿಳಿಸಿದರು.

10. ವಾರ್ಡ್ ವ್ಯಾಪ್ತಿಯಲ್ಲಿ ಬರುವ 28ನೇ ಅಡ್ಡ ರಸ್ತೆಯಲ್ಲಿ ಪಾದಚಾರಿ ಮಾರ್ಗದಲ್ಲಿ ಡೆಬ್ರಿಸ್ ಬಿದ್ದಿರುವುದನ್ನು ಚರ್ಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಅಭಿಯಂತರರು ಈಗಾಗಲೇ ತೆರವುಗೊಳಿಸಲಾಗಿದೆ ಎಂದು ತಿಳಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99

Scanned by CamScanner